# CCA ROUND-1 @ SRS DATE : 19-07-2023

ಪ್ರಾಚಾರ್ಯ ಎಂ.ಎಸ್.ಪ್ರಭಾಕರ್ ಹೇಳಿಕೆ | ಎಸ್‌ಆರ್‌ಎಸ್ ಕಾಲೇಜಿನಲ್ಲಿ ಪ್ರತಿಭೆ ಅನಾವರಣ

## ವ್ಯಕ್ತಿತ್ವದ ಬೆಳವಣಿಗೆಗೆ ಪಠ್ಯೇತರ ಚಟುವಟಿಕೆ ಆಸರೆ

■ ವಿಜಯವಾಣಿ ಸುದ್ದಿಜಾಲ ಚಿತ್ರದುರ್ಗ

ನಗರದ ಎಸ್‌ಆರ್‌ಎಸ್ ಹೆರಿಟೇಜ್ ಶಾಲೆಯಲ್ಲಿ ಬುಧವಾರ ಏರ್ಪಡಿಸಿದ್ದ ಮೊದಲ ಹಂತದ ಪಠ್ಯೇತರ ಚಟುವಟಿಕೆಯ ಕಾರ್ಯಕ್ರಮ 1-10ನೇ ತರಗತಿ ವಿದ್ಯಾರ್ಥಿಗಳ ವೈವಿಧ್ಯಮಯ ಪ್ರತಿಭೆ ಅನಾವರಣಕ್ಕೆ ಸಾಕ್ಷಿಯಾಯಿತು.

1-2ನೇ ತರಗತಿ ವಿದ್ಯಾರ್ಥಿಗಳಿಗೆ ವೆಜಿಟೆಬಲ್ ಪ್ರೆಸ್ ವರ್ಕ್, 3-4ನೇ ತರಗತಿಗೆ ಒರಿಗಾಮಿ, 5-6ನೇ ತರಗತಿಗೆ ಪೇಪರ್ ಆರ್ಟ್, 7-8ನೇ ತರಗತಿಗೆ ಮಾರ್ಬಲ್ ಗೋಲಿ ಹಾಗೂ 9-10ನೇ ತರಗತಿ ವಿದ್ಯಾರ್ಥಿಗಳಿಗೆ ಕುಕ್ ವಿದೌಟ್ ಫೈರ್ ಸ್ಪರ್ಧೆಗಳು ನಡೆದವು.

ಪ್ರಾಚಾರ್ಯ ಎಂ.ಎಸ್.ಪ್ರಭಾಕರ್ ಮಾತನಾಡಿ, ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಪ್ರತಿಭಾ ಪ್ರದರ್ಶನಕ್ಕೆ ವೇದಿಕೆ ಒದಗಿಸುತ್ತವೆ. ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪಠ್ಯೇತರ ಚಟುವಟಿಕೆಗಳು ನೆರವಾಗುತ್ತವೆ ಎಂದರು.

ಕಾರ್ಯಕ್ರಮದಲ್ಲಿ ರೂಪಿಸಿದ್ದ ಚಟುವಟಿಕೆಗಳು ವಿದ್ಯಾರ್ಥಿಗಳ ಕಲಿಕೆಯಲ್ಲಿ ಮಹತ್ವದ ಪಾತ್ರ ವಹಿಸುವ ಜತೆಗೆ ಅವರ ವ್ಯಕ್ತಿತ್ವದ ಬೆಳವಣಿಗೆಗೆ ಸಹಕಾರಿಯಾಗುತ್ತವೆ ಎಂದು ಅಭಿಪ್ರಾಯಪಟ್ಟರು.

ಸಹಪಠ್ಯೇತರ ಚಟುವಟಿಕೆಗಳ ಸಂಚಾಲಕರಾದ ಸುನೀಲ್ ಭಟ್, ಲುಬ್ನಾ ಕೌಸರ್ ಮತ್ತಿತರರು ಇದ್ದರು.

ವಿಜಯವಾಣಿ ಚಿತ್ರ



ಚಿತ್ರದುರ್ಗ ಎಸ್‌ಆರ್‌ಎಸ್ ಹೆರಿಟೇಜ್ ಶಾಲೆಯಲ್ಲಿ ಪಠ್ಯೇತರ ಚಟುವಟಿಕೆಗಳ ಅಂಗವಾಗಿ ಆಯೋಜಿಸಿದ್ದ ಕುಕ್ ವಿದೌಟ್ ಫೈರ್ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳು.